# **ಕರ್ನಾಟಕ ಲೋಕಾಯುಕ್ತ**

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.109/2017/ಸನಿಕಾಸ–2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಭೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:17.7.2017.

## **ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ**

ವಿಷಯ:– ದೊಡ್ಡಬಳ್ಳಾಪುರ ತಾಲ್ಲೂಕು ದೊಡ್ಡ ತುಮಕೂರು ಗ್ರಾಮದ ದೂರುದಾರರ ಹಿಡುವಳಿ ಜಮೀನು ಸರ್ವೆ ನಂ.87/4 ಕ್ಷೇತ್ರ 14 ಗುಂಟೆ ಪೈಕಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಒತ್ತುವರಿಯಾದ $1^{1/4}$ ಗುಂಟೆ ಜಮೀನನ್ನು ತೆರವುಗೊಳಿಸಿ, ದೂರುದಾರರಿಗೆ ಹಿಂದಿರುಗಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವ ಬಗ್ಗೆ.

*******

ಶ್ರೀಮತಿ ಪಿ.ಮಮತ, ನೆಲ್ಲುಕುಂಟೆಯ ನಿವಾಸಿ,ಬೆಂಗಳೂರು ಉತ್ತರ ತಾಲ್ಲೂಕು, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀಮತಿ ರೇವತಿ, ಪಿಡಿಒ, ದೊಡ್ಡತುಮಕೂರು ಗ್ರಾಮ ಪಂಚಾಯತಿ, ದೊಡ್ಡಬಳ್ಳಾಪುರ ತಾಲ್ಲೂಕು (2) ಶ್ರೀ ಅಶ್ವತ್ಥರೆಡ್ಡಿ, ಕಾರ್ಯನಿರ್ವಾಹಕ ಅಧಿಕಾರಿಗಳು, (3) ಶ್ರೀ ಹನುಮಂತಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿಗಳು, ದೊಡ್ಡಬಳ್ಳಾಪುರ ತಾಲ್ಲೂಕು, (4) ಶ್ರೀ ಎಂ.ಕೆ.ರಮೇಶ್, ತಹಶೀಲ್ದಾರ್, ದೊಡ್ಡಬಳ್ಳಾಪುರ,(ಇನ್ನು ಮುಂದೆ ಕ್ರಮವಾಗಿ 1ರಿಂದ 4ನೇ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:–**

ದೂರುದಾರರು ತಮ್ಮ ದೂರಿನಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕು ದೊಡ್ಡತುಮಕೂರು ಗ್ರಾಮದ ಸರ್ವೆ ನಂ.87/4 ಕ್ಷೇತ್ರ 14 ಗುಂಟೆ ಪೈಕಿ $1^{1/4}$ ಗುಂಟೆ ಜಮೀನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಒತ್ತುವರಿಯಾಗಿರುತ್ತದೆ. ಈ ಒತ್ತುವರಿ ಜಾಗವನ್ನು ತೆರವುಗೊಳಿಸಬೇಕೆಂದು

ಎದುರುದಾರರಿಗೆ ಅರ್ಜಿ ಸಲ್ಲಿಸಿದರೂ ಯಾವುದೇ ಕ್ರಮಕೈಗೊಂಡಿರುವುದಿಲ್ಲ. ಆದ್ದರಿಂದ ಎದುರುದಾರರ ವಿರುದ್ಧ ಕ್ರಮಕೈಗೊಳ್ಳಬೇಕೆಂದು ತಮಗೆ ನ್ಯಾಯದೊರಕಿಸಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

3. 1ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದಿ.4.3.2015ರಂದು ನಡೆದ ಗ್ರಾಮಪಂಚಾಯತಿ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ ಶಿಕ್ಷಣಾಲಯಕ್ಕೆ ಹಾಗೂ ತಾಲ್ಲೂಕು ಪಂಚಾಯತಿಗಳಿಗೆ ಪತ್ರ ರವಾನಿಸಿದ್ದು, ಆ ಪ್ರಕಾರ ಮುಂದಿನ ಕ್ರಮಕೈಗೊಳ್ಳಲಾಗುವುದೆಂದು ತಿಳಿಸಿರುತ್ತಾರೆ.

4. 2ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯು 3ನೇ ಎದುರುದಾರರ ವ್ಯಾಪ್ತಿಗೆ ಬರುವುದರಿಂದ ಅದನ್ನು ತೆರವುಗೊಳಿಸಲು ಅವರಿಗೆ ಸೂಚಿಸಲಾಗಿರುತ್ತದೆ. ಸರ್ವೆ ನಂ.87/4 ಇದು ತಹಶೀಲ್ದಾರರ ವ್ಯಾಪ್ತಿಗೆ ಬರುವುದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

5. 3ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಸುಮಾರು 75 ವರ್ಷಗಳ ಹಿಂದೆ ಈ ಶಾಲಾ ಕಟ್ಟಡ ಕಟ್ಟಿದ್ದು, ಇಲ್ಲಿ ಮೊದಲಿನಿಂದಲೂ ಕಂಪೌಂಡ್ ನಿರ್ಮಿಸಲಾಗಿದೆ. ಆದ್ದರಿಂದ ಯಾವುದೇ ಒತ್ತುವರಿಯಾಗಿರುವುದಿಲ್ಲವೆಂದು ತಿಳಿಸಿರುತ್ತಾರೆ.

6. 4ನೇ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರ $1^{1/4}$ ಗುಂಟೆ ಜಮೀನು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಅಡಿಗೆಮನೆ, ನೀರಿನ ಸಂಪು ಹಾಗೂ ಶೌಚಾಲಯಕ್ಕೆ ಒತ್ತುವರಿಯಾಗಿರುವುದಾಗಿ ತಾಲ್ಲೂಕು ಮೋಜಣಿದಾರರು ತಿಳಿಸಿರುತ್ತಾರೆ. ಆದರೆ ಇದು ಹಿಡುವಳಿ ಜಮೀನಾಗಿದ್ದು, ಇದರಲ್ಲಿ ಹಸ್ತಕ್ಷೇಪ ಮಾಡುವುದು ಸರಿಯಲ್ಲವೆಂದು ತಿಳಿದು ದೂರುದಾರರು ಸೂಕ್ತ ಪ್ರಾಧಿಕಾರದಲ್ಲಿ ಪರಿಹಾರ ಕಂಡುಕೊಳ್ಳಬಹುದಾಗಿದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

7. ದೂರುದಾರರು ತಮ್ಮ ಪ್ರತ್ಯುತ್ತರ ಸಲ್ಲಿಸಿರುವುದಿಲ್ಲ.

78

8. ದೂರುದಾರರು ಸಲ್ಲಿಸಿದ ದೂರು, ಆಕ್ಷೇಪಣೆ, ಮತ್ತು ದಾಖಲೆಗಳನ್ನು ಪರಿಶೀಲಿಸಿದಾಗ, ತಾಲ್ಲೂಕು ಮೋಜಣಿದಾರರು ಸರ್ವೆ ನಂ.87/4ನ್ನು ಅಳತೆ ಮಾಡಿ ಸ್ಕೆಚ್‌ನೊಂದಿಗೆ ವರದಿ ನೀಡಿದ್ದು, ಅದರಲ್ಲಿ $1^{1/4}$ ಗುಂಟೆಯಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಬಿಸಿಯೂಟದ ಅಡಿಗೆಮನೆ, ನೀರಿನ ಸಂಪು, ಮತ್ತು ಶೌಚಾಲಯ ಇರುತ್ತದೆಂದು ತಿಳಿಸಿರುತ್ತಾರೆ. ಬ್ಲಾಕ್ 2ರಲ್ಲಿ 2 ಗುಂಟೆ ಜಾಗದಲ್ಲಿ ಸಾರ್ವಜನಿಕರು, ಬಸ್ ಓಡಾಡುವ ಡಾಂಬರ್ ರಸ್ತೆ ಇರುತ್ತದೆಂದು ಉಲ್ಲೇಖಿಸಿರುತ್ತಾರೆ. ಮೋಜಣಿದಾರರ ವರದಿಯನ್ನು ಪರಿಶೀಲಿಸಲಾಗಿ ದೂರುದಾರರ ಹಿಡುವಳಿ ಜಮೀನು ಸರ್ವೆ ನಂ. 87/4ರಲ್ಲಿ $1^{1/4}$ ಗುಂಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಹಾಗೂ 2 ಗುಂಟೆ ಸಾರ್ವಜನಿಕ ರಸ್ತೆಗೆ ಒತ್ತುವರಿಯಾಗಿದೆಯೆಂದು ಕಂಡುಬರುತ್ತದೆ.

9. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, **ದೊಡ್ಡಬಳ್ಳಾಪುರ ತಾಲ್ಲೂಕು ದೊಡ್ಡತುಮಕೂರು ಗ್ರಾಮದ ದೂರುದಾರರ ಹಿಡುವಳಿ ಜಮೀನು ಸರ್ವೆ ನಂ.87/4 ಕ್ಷೇತ್ರ 14 ಗುಂಟೆಯಲ್ಲಿ $1^{1/4}$ ಗುಂಟೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಹಾಗೂ 2 ಗುಂಟೆ ಸಾರ್ವಜನಿಕ ರಸ್ತೆಗೆ ಒತ್ತುವರಿಯಾಗಿದ್ದು, ಸದರಿ ಜಮೀನನ್ನು ತೆರವುಗೊಳಿಸಿ ದೂರುದಾರರಿಗೆ ಹಿಂದಿರುಗಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು** ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

10. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

Sd/- 17/7/17

**[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ.**

17/7